## ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 716 (572) |
| ಮಾನ್ಯ ಸದಸ್ಯರ ಹೆಸರು | | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 18.08.2025 |
| ಪ್ರಶ್ನೆ | | ಉತ್ತರ |
| | | |
| ಅ) | ಗುಲಬರ್ಗಾ ವಿಶ್ವವಿದ್ಯಾಲಯವು ಕುಲಪತಿ ಹಾಗೂ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದ ಗಂಭೀರ ಸಮಸ್ಯೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ, ಈ ಕೊರತೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಪ್ರಸ್ತುತ ಖಾಲಿಯಿರುವ ಕುಲಪತಿ ಹುದ್ದೆಯನ್ನು ಭರ್ತಿ ಮಾಡಲು ಯುಜಿಸಿ ರೆಗ್ಯೂಲೇಷನ್ಸ್ ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 14(2) ರನ್ವಯ ಕ್ರಮವಹಿಸಲಾಗಿದ್ದು ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ.<br><br>ಸದರಿ ವಿಶ್ವವಿದ್ಯಾಲಯದಲ್ಲಿ ಖಾಲಿಯಿರುವ 132 ಬೋಧಕ ಮತ್ತು 58 ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿ, ಆರ್ಥಿಕ ಇಲಾಖೆಯು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 25.11.2024ರಲ್ಲಿ ನೇರ ನೇಮಕಾತಿ ಮೂಲಕ ಹುದ್ದೆಗಳ ಭರ್ತಿ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿರ್ಬಂಧಗಳನ್ನು ಹಿಂಪಡೆದ/ತೆರವುಗೊಳಿಸಿದ ನಂತರ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಿರುತ್ತದೆ. ಆರ್ಥಿಕ ಇಲಾಖೆಯ ನಿರ್ದೇಶನದನುಸಾರ ಗುಲ್ಬರ್ಗಾ ವಿವಿಗೆ ದಿನಾಂಕ: 28.05.2025ರಂದು ಹಿಂಬರಹ ನೀಡಲಾಗಿರುತ್ತದೆ. |
| ಆ) | ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಕುಲಪತಿ ನೇಮಕಾತಿ ಮಾಡುವ ಸಲುವಾಗಿ ಶೋಧನಾ ಸಮಿತಿಯನ್ನು ಯಾವಾಗ ರಚಿಸಲಾಯಿತು; ಹಾಗೂ ಸದರಿ ಸಮಿತಿಯು ಅಂತಿಮ ಶಿಫಾರಸ್ಸು ಮಾಡಿದ್ದು, ಯಾವಾಗ; ಇದುವರೆವಿಗೂ ಕುಲಪತಿ ನೇಮಕವಾಗದಿರಲು ಕಾರಣವೇನು; | ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಕುಲಪತಿ ಹುದ್ದೆಯ ನೇಮಕಾತಿಗಾಗಿ ಸರ್ಕಾರದ ಅಧಿಸೂಚನೆ ಸಂಖ್ಯೆ: ED 154 UGV 2024, ದಿನಾಂಕ: 03.02.2025 ರಂದು ಶೋಧನಾ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಶೋಧನಾ ಸಮಿತಿಯು ದಿನಾಂಕ: 03.04.2025ರಂದು ಸಭೆಯನ್ನು ನಡೆಸಿ ಅಂತಿಮ ಶಿಫಾರಸ್ಸು ಮಾಡಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಇ) | ಈ ಕುಲಪತಿ ಹುದ್ದೆಗೆ 371(ಜೆ) ಪ್ರಕಾರ ಸ್ಥಳೀಯ ಪ್ರತಿಭಾವಂತ ಪ್ರಾಧ್ಯಾಪಕರಿಗೆ ಆದ್ಯತೆ ನೀಡಲು ಸರ್ಕಾರ ಕ್ರಮವಹಿಸುವುದೇ? (ವಿವರ ನೀಡುವುದು) | ನಿಯಮಗಳಲ್ಲಿ ಅವಕಾಶಗಳಿರುವುದಿಲ್ಲ |

ಸಂಖ್ಯೆ: ಇಡಿ 143 ಯುಜಿವಿ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು